21-06-2012

Annexure-3

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: "ವಾಜಿಪೇಯಿ ಆರೋಗ್ಯಶ್ರೀ" ಯೋಜನೆಯನ್ನು ಬೆಂಗಳೂರು ಮತ್ತು ಮೈಸೂರು ವಿಭಾಗಗಳಿಗೆ ವಿಸ್ತರಿಸುವ ಬಗ್ಗೆ.

ಓದಲಾಗಿದೆ:

(1) ಮಾನ್ಯ ಮುಖ್ಯ ಮಂತ್ರಿಯವರು 2012-13 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 108 ರಲ್ಲಿ ಮಾಡಿರುವ ಘೋಷಣೆ.

(2) ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನ ಕಾರ್ಯಕಾರಿ ನಿರ್ದೇಶಕರ ಪತ್ರ ಸಂಖ್ಯೆ: ಹೆಚ್‌ಎಫ್‌ಡಬ್ಲ್ಯೂ/ಎಸ್.ಎ.ಎಸ್.ಟಿ/126/2011-12 ದಿನಾಂಕ 27-3-2012.

(3) ಸಚಿವ ಸಂಪುಟದ ತೀರ್ಮಾನ: ವಿಷಯ ಸಂಖ್ಯೆ ಸಿ/293/2012 ದಿನಾಂಕ 14-6-2012.

ಪ್ರಸ್ತಾವನೆ:

ಕರ್ನಾಟಕ ರಾಜ್ಯದಲ್ಲಿ ಬಡತನ ರೇಖೆಗಿಂತ ಕೆಳಗಿರುವ ಜನರು ಒಮ್ಮೆಲೆ ದುರಂತ ಉಂಟು ಮಾಡುವ (catastrophic) ಆರೋಗ್ಯ ಆಘಾತಗಳಿಗೆ ಒಳಗಾಗುತ್ತಾರೆ. ರಾಜ್ಯದಲ್ಲಿ ಪ್ರಸ್ತುತ ಇರುವ ಆರೋಗ್ಯ ವಿಮೆ ಕಾರ್ಯಕ್ರಮಗಳು ಬಡತನ ರೇಖೆಗಿಂತ ಕೆಳಗಿರುವ ಜನರಿಗೆ ಬಹಳ ಕಡಿಮೆ ಪ್ರಮಾಣದಲ್ಲಿ ತಲುಪುತ್ತಿವೆ. ಈ ತೊಂದರೆಯನ್ನು ನಿವಾರಿಸಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು "ವಾಜಿಪೇಯಿ ಆರೋಗ್ಯಶ್ರೀ" ಎಂಬ ಯೋಜನೆಯನ್ನು ಬಡತನ ರೇಖೆಗಿಂತ ಕೆಳಗಿರುವ ಜನರಿಗೆ ನಗದು ರಹಿತವಾಗಿ ಆರೋಗ್ಯ ಚಿಕಿತ್ಸೆ ಸೌಲಭ್ಯವನ್ನು ಒದಗಿಸುವ ಮೂಲಕ ಒಮ್ಮೆಲೆ ದುರಂತ ಉಂಟು ಮಾಡುವ ಕಾಯಿಲೆಗಳಿಗೆ ಸಹ ಚಿಕಿತ್ಸೆ ನೀಡಲು ಗುಲ್ಬರ್ಗಾ ವಿಭಾಗದಲ್ಲಿ ದಿನಾಂಕ: 18-02-2010 ರಿಂದ ಜಾರಿಗೆ ತಂದಿದೆ. ಸದರಿ ಯೋಜನೆಯನ್ನು ಬೆಳಗಾಂ ವಿಭಾಗಕ್ಕೆ ಸಹ ದಿನಾಂಕ: 29-10-2010 ರಿಂದ ವಿಸ್ತರಿಸಲಾಗಿದೆ. ಅದರಂತೆ, ವಾಜಪೇಯಿ ಆರೋಗ್ಯಶ್ರೀ ಯೋಜನೆಯನ್ನು ಪ್ರಸ್ತುತ ಗುಲ್ಬರ್ಗಾ ಮತ್ತು ಬೆಳಗಾಂ ವಿಭಾಗಗಳಲ್ಲಿ ಕ್ರಮವಾಗಿ 16 ಮತ್ತು 17 ಲಕ್ಷ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳನ್ನು ಒಳಪಡಿಸಿ ಜಾರಿಗೊಳಿಸಲಾಗುತ್ತಿದೆ. ಈ ಯೋಜನೆಯ ಪ್ರಮುಖಾಂಶಗಳು ಕೆಳಕಂಡಂತಿವೆ:

(ಎ) ಈ ಯೋಜನೆಯಡಿ ಬಡತನ ರೇಖೆಗಿಂತ ಕೆಳಗಿರುವ ಎಲ್ಲಾ ಗ್ರಾಮೀಣ ಮತ್ತು ನಗರ ಪ್ರದೇಶಗಳ ಜನರು ಒಳಗೊಂಡಿದ್ದಾರೆ. ಪ್ರತಿ ಕುಟುಂಬದ ಐವರು ಸದಸ್ಯರು ಆಘಾತಕಾರಿ ಕಾಯಿಲೆಗಳಾದ ಹೃದ್ರೋಗ, ಅರ್ಬುದ, ನರ ರೋಗ, ಮೂತ್ರಪಿಂಡ ಕಾಯಿಲೆಗಳು, ಸುಟ್ಟಗಾಯಗಳು, ಪಾಲಿಟ್ರಾಮ (ಮೋಟಾರು ವಾಹನ ವಿಮೆಯಡಿ ಒಳಗೊಂಡ ಪ್ರಕರಣಗಳನ್ನು ಹೊರತುಪಡಿಸಿ) ಹಾಗೂ ನಿಯೋ-ನಾಟಲ್ ಇತ್ಯಾದಿಗಳಿಗೆ ಗುರುತಿಸಲ್ಪಟ್ಟ ಜಾಲ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸೆ ಪಡೆಯಲು ಅರ್ಹರಾಗಿರುತ್ತಾರೆ. ಸದರಿ ಯೋಜನೆಯಡಿ 402 ಪ್ರೊಸೀಜರ್‌ಗಳನ್ನು ಹಾಗೂ 50 ಹಿಂಬಾಲಿಕೆ (follow-up) ಪ್ಯಾಕೇಜ್‌ಗಳನ್ನು ಪ್ರಸ್ತುತ ನೀಡಲಾಗುತ್ತಿದೆ.

21/6/12

(ಬಿ) ಆಘಾತಕಾರಿ ಕಾಯಿಲೆಗಳ ಚಿಕಿತ್ಸೆಗಾಗಿ ಪ್ರತಿ ಕುಟುಂಬವೊಂದಕ್ಕೆ ₹ 1,50,000 ರಂತೆ ಚಿಕಿತ್ಸೆಯ ಗರಿಷ್ಠ ಮೊತ್ತವನ್ನು ಫ್ಯಾಮಿಲಿ ಫ್ಲೋಟರ್ ಆಧಾರದ ಮೇಲೆ ನಿಗಧಿಪಡಿಸಲಾಗಿದೆ. ಇಡೀ ಕುಟುಂಬಕ್ಕೆ ಪ್ರಕರಣದಿಂದ ಪ್ರಕರಣಕ್ಕೆ ಆಧಾರಿತವಾಗಿ ಪ್ರತಿ ವರ್ಷ ₹ 50,000 ಮೊತ್ತಕ್ಕೆ ಹೆಚ್ಚುವರಿ ಚಿಕಿತ್ಸೆಯನ್ನು ನೀಡಲಾಗುವುದು. ರೋಗಿಯು ಆಸ್ಪತ್ರೆಗೆ ಸೇರಿ ಚಿಕಿತ್ಸೆ ಪಡೆದು ಗುಣಮುಖವಾಗಿ ಬಿಡುಗಡೆ ಹೊಂದುವ ತನಕ ಚಿಕಿತ್ಸಾ ವೆಚ್ಚ, ಆಹಾರ, ಸಾರಿಗೆ ಹಾಗೂ ಒಂದು ವೇಳೆ ಚಿಕಿತ್ಸಾ ಸಮಯದಲ್ಲಿ ಯಾವುದಾದರೂ ಜಟಿಲ ಆರೋಗ್ಯ ಸಮಸ್ಯೆ ಉಂಟಾದಲ್ಲಿ ಅದರ ಚಿಕಿತ್ಸೆ ವೆಚ್ಚ ಸೇರಿದಂತೆ ಬೆನಿಫಿಟ್ ಪ್ಯಾಕೇಜ್ ಒಳಗೊಂಡಿರುತ್ತದೆ.

(ಸಿ) ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯು ಬಡತನ ರೇಖೆಗಿಂತ ಕೆಳಗಿರುವ ಕುಟುಂಬಕ್ಕೆ ನೀಡುವ ಖಾಯಂ ಪಡಿತರ ಚೀಟಿಯನ್ನು ಬಡತನ ರೇಖೆಗಿಂತ ಕೆಳಗಿರುವ ಕುಟುಂಬವನ್ನು ಗುರುತಿಸಲು ಮಾನದಂಡವೆಂದು ಪರಿಗಣಿಸಲಾಗಿದೆ.

(ಡಿ) . ಈ ಯೋಜನೆಯಡಿ ತಗಲುವ ಸಂಪೂರ್ಣ ವೆಚ್ಚವನ್ನು ಸರ್ಕಾರವು ಅನುದಾನವನ್ನು ಒದಗಿಸುವ ಮೂಲಕ ಭರಿಸುತ್ತಿದೆ ಹಾಗು ಫಲಾನುಭವಿಗಳ ಕುಟುಂಬವು ಯಾವುದೇ ವಂತಿಕೆಯನ್ನು ನೀಡಬೇಕಾಗಿರುವುದಿಲ್ಲ.

(ಇ) ಈ ಯೋಜನೆಯನ್ನು ಒಂದು ಟ್ರಸ್ಟ್ (ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್) ಮೂಲಕ ಅನುಷ್ಠಾನಗೊಳಿಸಲಾಗುತ್ತಿದ್ದು, ಇದರಲ್ಲಿ ಮಾನ್ಯ ಮುಖ್ಯ ಮಂತ್ರಿಯವರು ಮುಖ್ಯ ಪೋಷಕರು, ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಪೋಷಕರು, ಸರ್ಕಾರದ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆರವರು ಅಧ್ಯಕ್ಷರು ಹಾಗೂ ಇತರರು ಟ್ರಸ್ಟಿಗಳಾಗಿದ್ದಾರೆ. ದಿನ ನಿತ್ಯದ ಆಡಳಿತ ನಿರ್ವಹಣೆಗೆ ಸರ್ಕಾರದ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಒಂದು ಕಾರ್ಯನಿರ್ವಾಹಕ ಸಮಿತಿಯನ್ನು ರಚಿಸಲಾಗಿದೆ.

ಮುಂದುವರೆದು, ಮಾನ್ಯ ಮುಖ್ಯ ಮಂತ್ರಿಯವರು ಮೇಲೆ (1) ರಲ್ಲಿ ಓದಲಾದ ಆಯವ್ಯಯ ಭಾಷಣದ ಕಂಡಿಕೆ 108 ರಲ್ಲಿ ಈ ಕೆಳಕಂಡಂತೆ ಘೋಷಿಸಿದ್ದಾರೆ:

"ಗುಲ್ಬರ್ಗಾ ಮತ್ತು ಬೆಳಗಾವಿ ರೆವಿನ್ಯೂ ವಿಭಾಗಗಳ 13 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿರುವ ವಾಜಪೇಯಿ ಆರೋಗ್ಯಶ್ರೀ ಯೋಜನೆಗೆ ಸಾರ್ವಜನಿಕರಿಂದ ವ್ಯಾಪಕವಾದ ಪ್ರಶಂಸೆ ವ್ಯಕ್ತವಾಗಿದೆ. ಇದುವರೆಗೆ ಫಲಾನುಭವಿಗಳಿಗೆ 102 ಕೋಟಿ ರೂ.ಗಳ ವೆಚ್ಚದಲ್ಲಿ ಚಿಕಿತ್ಸೆ ನೀಡಲಾಗಿದೆ. 2012-13 ನೇ ಸಾಲಿನಲ್ಲಿ ಈ ಯೋಜನೆಯನ್ನು ಇಡೀ ರಾಜ್ಯಕ್ಕೆ ಅನ್ವಯವಾಗುವಂತೆ ಇತರ ಎರಡು ರೆವಿನ್ಯೂ ವಿಭಾಗಗಳಿಗೂ ವಿಸ್ತರಿಸಲಾಗುವುದು".

ಮೇಲೆ ತಿಳಿಸಿದಂತೆ ಘೋಷಿಸಿದ ನೀತಿಗೆ ಅನುಗುಣವಾಗಿ "ವಾಜಪೇಯಿ ಆರೋಗ್ಯಶ್ರೀ" ಯೋಜನೆಯನ್ನು ಬೆಂಗಳೂರು ವಿಭಾಗದ 9 ಜಿಲ್ಲೆಗಳಾದ ಬೆಂಗಳೂರು ಗ್ರಾಮಾಂತರ, ಬೆಂಗಳೂರು

ನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಕೋಲಾರ, ರಾಮನಗರ, ಶಿವಮೊಗ್ಗ ಮತ್ತು ತುಮಕೂರು ಮತ್ತು ಮೈಸೂರು ವಿಭಾಗದ 8 ಜಿಲ್ಲೆಗಳಾದ ಮೈಸೂರು, ಹಾಸನ, ಮಂಡ್ಯ, ಚಾಮರಾಜನಗರ, ಕೊಡಗು, ದಕ್ಷಿಣ ಕನ್ನಡ, ಉಡುಪಿ ಮತ್ತು ಚಿಕ್ಕಮಗಳೂರು ಇವುಗಳಿಗೆ ವಿಸ್ತರಿಸಲು ಉದ್ದೇಶಿಸಲಾಗಿದೆ. 2011 ರ ಜನಗಣತಿಯ ಪ್ರಕಾರ, ಬೆಂಗಳೂರು ವಿಭಾಗದ 9 ಜಿಲ್ಲೆಗಳಲ್ಲಿ ಒಟ್ಟು 29.14 ಲಕ್ಷ ಹಾಗು ಮೈಸೂರು ವಿಭಾಗದ 8 ಜಿಲ್ಲೆಗಳಲ್ಲಿ ಒಟ್ಟು 20.31 ಲಕ್ಷ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳಿವೆ. ಪ್ರಸಕ್ತ ಸಾಲಿನಲ್ಲಿ, ವಾಜಪೇಯಿ ಆರೋಗ್ಯಶ್ರೀ ಯೋಜನೆಯನ್ನು ಅನುಷ್ಠಾನಗೊಳಿಸಲು ಒಟ್ಟು ₹ 70 ಕೋಟಿಗಳ ಅನುದಾನವನ್ನು ಒದಗಿಸಲಾಗಿದೆ. ಆದುದರಿಂದ, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನ ಕಾರ್ಯಕಾರಿ ನಿರ್ದೇಶಕರು ಮೇಲೆ (2) ರಲ್ಲಿ ಓದಲಾದ ಪತ್ರ ದಿನಾಂಕ: 17-4-2012 ರಲ್ಲಿ ವಾಜಪೇಯ ಆರೋಗ್ಯಶ್ರೀ ಯೋಜನೆಯನ್ನು ಬೆಂಗಳೂರು ಮತ್ತು ಮೈಸೂರು ವಿಭಾಗಳಿಗೆ ವಿಸ್ತರಿಸುವ ಕುರಿತು ಅವಶ್ಯ ಆದೇಶವನ್ನು ಹೊರಡಿಸುವಂತೆ ಸರ್ಕಾರವನ್ನು ಕೋರಿದ್ದಾರೆ.

ಈ ಪ್ರಸ್ತಾವನೆಯ ಬಗ್ಗೆ ಯೋಜನಾ ಮತ್ತು ಆರ್ಥಿಕ ಇಲಾಖೆಗಳೊಂದಿಗೆ ಸಮಾಲೋಚಿಸಿ ಪರಿಶೀಲಿಸಲಾಗಿ, ಸದರಿ ಇಲಾಖೆಗಳು ಕೆಲವು ಷರತ್ತು/ಸಲಹೆ ಗಳನ್ನು ನೀಡುತ್ತಾ ಪ್ರಸ್ತಾವನೆಗೆ ಸಹಮತಿ ನೀಡಿವೆ. ಮುಂದುವರೆದು, ಈ ವಿಷಯವನ್ನು ಸಚಿವ ಸಂಪುಟದ ಮುಂದೆ ಮೇಲೆ (3) ರಲ್ಲಿ ಓದಲಾದ ವಿಷಯ ಸಂಖ್ಯೆಯಲ್ಲಿ ಮಂಡಿಸಿ ಅನುಮೋದನೆ ಪಡೆಯಲಾಗಿದೆ.

ಆದುದರಿಂದ, "ವಾಜಿಪೇಯಿ ಆರೋಗ್ಯಶ್ರೀ" ಯೋಜನೆಯನ್ನು ಗುಲ್ಬರ್ಗಾ ಮತ್ತು ಬೆಳಗಾಂ ವಿಭಾಗಗಳಲ್ಲಿ ಜಾರಿಗೊಳಿಸುತ್ತಿರುವ ರೀತಿಯಲ್ಲಿಯೇ ಬೆಂಗಳೂರು ಮತ್ತು ಮೈಸೂರು ವಿಭಾಗಗಳಿಗೂ ವಿಸ್ತರಿಸಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ, ಈ ಆದೇಶ

**ಸರ್ಕಾರಿ ಆದೇಶ ಸಂಖ್ಯೆ ಆಕುಕ 113 ಸಿಜಿಇ 2012**
**ಬೆಂಗಳೂರು, ದಿನಾಂಕ 21ನೇ ಜೂನ್ 2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, "ವಾಜಿಪೇಯಿ ಆರೋಗ್ಯಶ್ರೀ" ಯೋಜನೆಯನ್ನು ಬೆಂಗಳೂರು ವಿಭಾಗದ 9 ಜಿಲ್ಲೆಗಳಾದ ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಕೋಲಾರ, ರಾಮನಗರ, ಶಿವಮೊಗ್ಗ ಮತ್ತು ತುಮಕೂರು ಮತ್ತು ಮೈಸೂರು ವಿಭಾಗದ 8 ಜಿಲ್ಲೆಗಳಾದ ಮೈಸೂರು, ಹಾಸನ, ಮಂಡ್ಯ, ಚಾಮರಾಜನಗರ, ಕೊಡಗು, ದಕ್ಷಿಣ ಕನ್ನಡ, ಉಡುಪಿ ಮತ್ತು ಚಿಕ್ಕಮಗಳೂರು ಇವುಗಳಿಗೆ ವಿಸ್ತರಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ. ಸದರಿ ಯೋಜನೆಯನ್ನು ಅನುಷ್ಠಾನಗೊಳಿಸುವಾಗ ಕೆಳಕಂಡ ಮಾರ್ಗಸೂಚಿಗಳನ್ನು ಅನುಸರಿಸತಕ್ಕದ್ದು:

(1) ಸದರಿ ಯೋಜನೆಯನ್ನು ಗುಲ್ಬರ್ಗಾ ಮತ್ತು ಬೆಳಗಾಂ ವಿಭಾಗಗಳಲ್ಲಿ ಜಾರಿಗೊಳಿಸುತ್ತಿರುವ ರೀತಿಯಲ್ಲಿಯೇ ಬೆಂಗಳೂರು ಮತ್ತು ಮೈಸೂರು ವಿಭಾಗಗಳಲ್ಲೂ ಜಾರಿಗೊಳಿಸಲು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಕ್ರಮವಹಿಸುವುದು.

(2) ಈ ಯೋಜನೆಯನ್ನು ಅನುಷ್ಠಾನಗೊಳಿಸುವ ನೆರವಿನ ಏಜೆನ್ಸಿಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ಅದರಡಿ ರಚಿಸಲಾಗಿರುವ ನಿಯಮಗಳನ್ವಯ ಅನುಸರಿಸಿ ನೇಮಕಾತಿ ಮಾಡಿಕೊಳ್ಳುವುದು.

(3) ಸದರಿ ವಿಸ್ತರಣೆಯಿಂದ ಉಂಟಾಗುವ ಹೆಚ್ಚುವರಿ ಕಾರ್ಯಭಾರವನ್ನು ನಿಭಾಯಿಸಲು ಅವಶ್ಯವಿರುವ ಕನಿಷ್ಟ ಸಿಬ್ಬಂದಿಯನ್ನು ನೇಮಿಸುವುದು, ಮಾಹಿತಿ ತಂತ್ರಜ್ಞಾನ ಪ್ಲಾಟ್‌ಫಾರಂ ಅನ್ನು ಅಭಿವೃದ್ಧಿ ಪಡಿಸುವುದು ಹಾಗು ಮಾಹಿತಿ, ಶಿಕ್ಷಣ ಮತ್ತು ಸಂಪರ್ಕ ಚಟುವಟಿಕೆಗಳು ಇತ್ಯಾದಿ ಕ್ರಮಗಳ ಬಗ್ಗೆ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಕಾರ್ಯಕಾರಿ ಸಮಿತಿಯು ಕ್ರಮ ಕೈಗೊಳ್ಳುವುದು.

(4) ಸದರಿ ಯೋಜನೆಯನ್ನು ವಿಸ್ತರಿಸುವುದರ ಪರಿಣಾಮವಾಗಿ ಉಂಟಾಗುವ ಹೆಚ್ಚುವರಿ ವೆಚ್ಚವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಪ್ರಸಕ್ತ ಸಾಲಿನಲ್ಲಿ ಹಂಚಿಕೆಯಾಗಿರುವ ಒಟ್ಟಾರೆ ಅನುದಾನದಡಿ ಭರಿಸುವುದು. ಮುಂದುವರೆದು, 2013-14 ನೇ ಸಾಲಿಗೆ ಸಂಬಂಧಿಸಿದಂತೆ, ಅವಶ್ಯವಿರುವ ಅನುದಾನವನ್ನು ಒದಗಿಸಿಕೊಳ್ಳಲು ಕ್ರಮವಹಿಸುವುದು.

ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಪ್ರಸಕ್ತ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ 2210-80-001-0-01 ರ ಅಡಿಯಲ್ಲಿ ಒದಗಿಸಿರುವ ₹ 70 ಕೋಟಿಗಳ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಯೋಜನಾ ಮತ್ತು ಆರ್ಥಿಕ ಇಲಾಖೆಗಳ ಸಹಮತಿಯನ್ನು ಕ್ರಮವಾಗಿ ಅನಧಿಕೃತ ಟಿಪ್ಪಣಿ ಸಂಖ್ಯೆ ಪಿ.ಡಿ. 23 ಎಂಇ 2012 ದಿನಾಂಕ 26-5-2012 ಮತ್ತು ಎಫ್‌ಡಿ 641 ವೆಚ್ಚ-5/2012 ದಿನಾಂಕ 10-5-2012 ಮತ್ತು ಸಚಿವ ಸಂಪುಟದ ಅನುಮೋದನೆಯನ್ನು ವಿಷಯ ಸಂಖ್ಯೆ ಸಿ/293/2012 ದಿನಾಂಕ 14-6-2012 ರಲ್ಲಿ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಪಿ. ನಾರಾಯಣ)

ಸರ್ಕಾರದ ಅಧೀನ ಕಾರ್ಯದರ್ಶಿ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

ಇವರಿಗೆ:

1) ಮಹಾಲೇಖಪಾಲರು, ಲೆಕ್ಕಪತ್ರ/ಲೆಕ್ಕಪರಿಶೋಧನೆ, ಕರ್ನಾಟಕ, ಬೆಂಗಳೂರು
2) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು
3) ಅಭಿಯಾನ ನಿರ್ದೇಶಕರು, ಎನ್.ಆರ್.ಹೆಚ್.ಎಂ. ಬೆಂಗಳೂರು
4) ಯೋಜನಾ ಆಡಳಿತಾಧಿಕಾರಿ, ಕೆ.ಹೆಚ್.ಎಸ್.ಡಿ.ಆರ್.ಪಿ. ಬೆಂಗಳೂರು
5) ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, ಬೆಂಗಳೂರು
6) ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು
7) ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು

8) ಎಲ್ಲಾ ಜಿಲ್ಲಾ ಶಸ್ತ್ರ ಚಿಕಿತ್ಸಕರು.
9) ಆರ್ಥಿಕ ಇಲಾಖೆ (ವೆಚ್ಚ-5)
10) ಸಚಿವ ಸಂಪುಟ ಶಾಖೆ
11) ಯೋಜನಾ ಇಲಾಖೆ (ಎಂ. ಇ. ವಿಭಾಗ)
12) ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು

ಪ್ರತಿ ಮಾಹಿತಿಗಾಗಿ:

(1) ಸರ್ಕಾರದ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರವರ ಆಪ್ತ ಕಾರ್ಯದರ್ಶಿ.
(2) ಸರ್ಕಾರದ ಜಂಟಿ ಕಾರ್ಯದರ್ಶಿ-1, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(3) ಸಮನ್ವಯ ಶಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,